# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು - 572 103

ಸಂಖ್ಯೆ: ತುವಿ: ಶೈವಿ:ಪಿ.ಜಿ:2026-27:2276 ದಿನಾಂಕ:17.09.2026

## ಅಧಿಸೂಚನೆ

### ಸ್ನಾತಕೋತ್ತರ ಕೋರ್ಸ್‌ಗಳ ಉಳಿಕೆ ಸೀಟುಗಳ ಪ್ರವೇಶಾತಿ ಕುರಿತು

**ವಿಷಯ:** 2026-27ನೇ ಶೈಕ್ಷಣಿಕ ಸಾಲಿಗೆ ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ಕೋರ್ಸ್‌ಗಳ ಉಳಿಕೆ ಸೀಟುಗಳಿಗೆ ಪ್ರವೇಶಾತಿಗಾಗಿ ಅರ್ಜಿಯನ್ನು ಸಲ್ಲಿಸುವ ಕುರಿತು.

ಉಲ್ಲೇಖ:1. ಸಂಖ್ಯೆ:ತುವಿ:ಶೈವಿ:PG-ADM:2026-27/ 1405 ದಿನಾಂಕ:22.07.2026
2. ಸಂಖ್ಯೆ:ತುವಿ:ಶೈವಿ:PG-ADM:2026-27/ 1618 ದಿನಾಂಕ:03.08.2026
3. ಸಂಖ್ಯೆ: ತುವಿ: ಶೈವಿ:ಪಿ.ಜಿ:2026-27/1811 ದಿನಾಂಕ:14.08.2026
4. ಸಂಖ್ಯೆ: ತುವಿ: ಶೈವಿ:ಪಿ.ಜಿ:2026-27/1998 ದಿನಾಂಕ:24.08.2026
5. ಸಂಖ್ಯೆ: ತುವಿ: ಶೈವಿ:ಪಿ.ಜಿ:2026-27/2115 ದಿನಾಂಕ:02.09.2026
6. ಸಂಖ್ಯೆ: ತುವಿ: ಶೈವಿ:ಪಿ.ಜಿ:2026-27/2024 ದಿನಾಂಕ:25.08.2026
7. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:17.09.2026 (ಕಂಡಿಕೆ-89)

*****

ತುಮಕೂರು ವಿಶ್ವವಿದ್ಯಾನಿಲಯದ 2026-27ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕೋತ್ತರ ಕೋರ್ಸ್‌ಗಳಿಗೆ ಪ್ರಥಮ ದ್ವಿತೀಯ, ತೃತೀಯ ಮತ್ತು ನಾಲ್ಕನೇ ಹಂತದ ಪ್ರವೇಶ ಪ್ರಕ್ರಿಯೆ ಮುಕ್ತಾಯಗೊಂಡಿದ್ದು, ಕೆಲವು ವಿಭಾಗ/ಕಾಲೇಜುಗಳಲ್ಲಿ ಸೀಟುಗಳು ಉಳಿದಿರುವ ಹಿನ್ನೆಲೆಯಲ್ಲಿ ಅರ್ಹ ಆಸಕ್ತ ವಿದ್ಯಾರ್ಥಿಗಳು **ದಿನಾಂಕ:19.09.2026** ರ ವರೆಗೆ ಅಗತ್ಯ ದಾಖಲೆಗಳೊಂದಿಗೆ ಸಂಬಂಧಪಟ್ಟ ವಿಭಾಗಗಳನ್ನು ಸಂಪರ್ಕಿಸಿ ಅರ್ಜಿಯನ್ನು(**UUCMS OR MANUAL**) ಸಲ್ಲಿಸಿ ಪ್ರವೇಶಾತಿ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಮುಂದುವರೆದು 2026-27ನೇ ಶೈಕ್ಷಣಿಕ ಸಾಲಿನ ದ್ವಿತೀಯ ವರ್ಷದ ವಿವಿಧ ಸ್ನಾತಕೋತ್ತರ ಪದವಿಗಳಿಗೆ ಉಲ್ಲೇಖ(01)ರಲ್ಲಿ ಪ್ರವೇಶ ಶುಲ್ಕ ನಿಗದಿಪಡಿಸಿ ಅಧಿಸೂಚಿಸಲಾಗಿತ್ತು. ಅದರಂತೆ ಉಲ್ಲೇಖ(06) ರ ಸುತ್ತೋಲೆ ಪತ್ರದಲ್ಲಿ ಪ್ರವೇಶಾತಿ ಪಡೆಯುವಂತೆ ತಿಳಿಸಲಾಗಿತ್ತು. ಮುಂದುವರೆದು ರೂ.1,400/-(ರೂಪಾಯಿ ಒಂದು ಸಾವಿರದ ನಾಲ್ಕು ನೂರು ಮಾತ್ರ)ಗಳ ದಂಡ ಶುಲ್ಕದೊಂದಿಗೆ ಪ್ರವೇಶ ಶುಲ್ಕ ಪಾವತಿಸಿಕೊಳ್ಳಲು ಕೊನೆಯ **ದಿನಾಂಕ:19.09.2026** ಆಗಿರುತ್ತದೆ. ಅದರಂತೆ ಕ್ರಮವಹಿಸುವಂತೆ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ: ವಿಭಾಗಗಳ ಮುಖ್ಯಸ್ಥರು / ಸಂಯೋಜಕರನ್ನು ಸಂಪರ್ಕಿಸುವುದು.

ಸೂಚನೆ:1. ಉಲ್ಲೇಖ(01)ರ ಅಧಿಸೂಚನೆಯಲ್ಲಿನ ನಿಬಂಧನೆಗಳು ಹಾಗೂ ಸೂಚನೆಗಳಲ್ಲಿ ಯಾವುದೇ ಬದಲಾವಣೆಯಿರುವುದಿಲ್ಲ.

2. ವಿದ್ಯಾರ್ಥಿಗಳು ಪ್ರವೇಶಾತಿ ಅರ್ಜಿ ಶುಲ್ಕವನ್ನು **SB Collect** ಮುಖಾಂತರ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರ ಖಾತೆಗೆ ಪಾವತಿಸುವುದು ಹಾಗೂ ಚಲನ್‌ನನ್ನು **UUCMS** ಗೆ ಅಪ್ಲೋಡ್ ಮಾಡುವುದು. **UUCMS** ನಲ್ಲಿ **pay online** ಮೂಲಕ ಅರ್ಜಿ ಶುಲ್ಕ ಪಾವತಿಸುವಂತಿಲ್ಲ.
3. ಈಗಾಗಲೇ ಪ್ರಥಮ / ದ್ವಿತೀಯ / ತೃತೀಯ/ನಾಲ್ಕನೇ ಸುತ್ತಿನ ಪ್ರವೇಶಾತಿ ಪ್ರಕ್ರಿಯೆಯಲ್ಲಿ ಅರ್ಜಿ ಸಲ್ಲಿಸಿ ಪ್ರಥಮ / ದ್ವಿತೀಯ / ತೃತೀಯ / ನಾಲ್ಕನೇ ಸುತ್ತಿನ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸದ ವಿದ್ಯಾರ್ಥಿಗಳು ಐದನೇ ಸುತ್ತಿಗೆ ಪ್ರತ್ಯೇಕವಾಗಿ ಅರ್ಜಿಯನ್ನು ಸಲ್ಲಿಸುವ ಅವಶ್ಯಕತೆಯಿರುವುದಿಲ್ಲ. ಹಿಂದಿನ ಅರ್ಜಿಯನ್ನು ಐದನೇ ಸುತ್ತಿನ ಕೌನ್ಸಿಲಿಂಗ್‌ಗೆ ಪರಿಗಣಿಸಲಾಗುವುದು.
4. **Manual** ನಲ್ಲಿ ಅರ್ಜಿ ಸಲ್ಲಿಸಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಅರ್ಜಿಗಳನ್ನು ಪ್ರವೇಶ ಪ್ರಕ್ರಿಯೆ ಮುಗಿದ ನಂತರ **UUCMS** ಗೆ ಅಪ್ಲೋಡ್ ಮಾಡುವುದು.

ಆದೇಶದ ಮೇರೆಗೆ

17/9/26

ಉಪಕುಲಸಚಿವರು ಪು.ತಿ.ನೋ

ಶೈಕ್ಷಣಿಕ ವಿಭಾಗ

ತುಮಕೂರು ವಿಶ್ವವಿದ್ಯಾನಿಲಯ

ತುಮಕೂರು

ಗೆ,

1. ಅಧ್ಯಕ್ಷರು, ಎಲ್ಲಾ ಸ್ನಾತಕೋತ್ತರ ಪ್ರವೇಶಾತಿ ಸಮಿತಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಎಲ್ಲಾ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳ ಮುಖ್ಯಸ್ಥರು / ಸಂಯೋಜನಾಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು: **ಸೂಚನೆ (01) ರಿಂದ (04) ರ** ವರೆಗಿನ ಅಂಶಗಳನ್ನು ಪರಿಗಣಿಸಿ ಅದರಂತೆ ಕ್ರಮವಹಿಸುವುದು.
3. ಪ್ರಾಂಶುಪಾಲರುಗಳು, ವಿಶ್ವವಿದ್ಯಾನಿಲಯ ಘಟಕ ಮತ್ತು ಸಂಯೋಜಿತ ಸ್ನಾತಕೋತ್ತರ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು

ಪ್ರತಿಗಳು:

1. ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಡೀನರು ಕಲಾ/ ವಾಣಿಜ್ಯ ಮತ್ತು ನಿರ್ವಹಣೆ/ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯಗಳು, ತು.ವಿ.ತು
5. ಉಪಕುಲಸಚಿವರು, ಪರೀಕ್ಷಾಂಗ /ಸಾಮಾನ್ಯ & ಅಭಿವೃದ್ಧಿ/ ಸಿಬ್ಬಂದಿ/ ಕಾನೂನು ಕೋಶ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಸಿಸ್ಟಮ್ ಅನಾಲಿಸ್ಟ್, ತು.ವಿ.ತು – ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.
7. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ಕಚೇರಿ ಪ್ರತಿ.